CW.4 PW.4

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.687/2021

| | |
|---|---|
| ಸಾಕ್ಷಿದಾರರ ಹೆಸರು | ಕುಮಾರ್ |
| ತಂದೆಯ ಹೆಸರು | ನಿಂಗಯ್ಯ |
| ವಯಸ್ಸು | 44 ವರ್ಷ |
| ವೃತ್ತಿ | ಚಾಲಕ |
| ವಿಳಾಸ | ಅಂಬೇಡ್ಕರ್ ನಗರ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 27.03.2026 |

**<u>ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-</u>**

ಆರೋಪಿಯನ್ನು ನಾನು ನೋಡಿರುವುದಿಲ್ಲ. ಚಾಸಾ-1 ರಿಂದ 3, 5 ರಿಂದ 13 ರವರು ಗೊತ್ತಿರುವುದಿಲ್ಲ.

ಸುಮಾರು 4-5 ವರ್ಷಗಳ ಹಿಂದೆ ನಾನು ಪೈಪ್ ಲೈನ್ ರಸ್ತೆಯಲ್ಲಿ ಹೋಗುತ್ತಿದ್ದಾಗ ಪೋಲೀಸರು ನನ್ನ ಬಳಿ ಒಂದು ದಾಖಲೆಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ. ನಾನು ಯಾವುದೇ ಅಪಘಾತ ನೋಡಿಲ್ಲ.

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ಪಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ಪಾಟೀ ಸವಾಲುಃ ಸ. ಸ. ಅ. ರವರಿಂದ**

ದಿನಾಂಕ 05.03.2019 ರಂದು ಕನಕಪುರ ಟೌನ್ ಕೆ ಹೆಚ್ ಬಿ ಕಾಲೋನಿ ಬಳಿ ಇರುವ ಕನಕಪುರ ಸಾತನೂರು ರಸ್ತೆ ಹಾಗೂ ಬಿಡಬ್ಲ್ಯೂ ಎಸ್ ಎಸ್ ಬಿ ಪೈಪ್ ಲೈನ್ ಕ್ರಾಸ್ ಜಂಕ್ಷನ್ ಬಳಿ ಕನಕಪುರ ಸಾತನೂರು ರಸ್ತೆಯ ಬಳಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಸಂಜೆ 4 ರಿಂದ 5 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ಸ್ಥಳದಲ್ಲಿ ಅಪಘಾತ ಪಡಿಸಿದ ಹಾಗೂ ಅಪಘಾತಕ್ಕೆ ಒಳಗಾದ ವಾಹನಗಳನ್ನು ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ಗೊತ್ತಿದ್ದರೂ ಸಹಿತ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**